ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	609
ಮಾನ್ಯ ಸದಸ್ಯರ ಹೆಸರು	ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	17.12.2021
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಉಡುಪಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಹಂತದ ಕಛೇರಿಗಳು ಯಾವುವು; ಅವುಗಳಲ್ಲಿ ಮಂಜೂರಾತಿಯಾದ ಹುದ್ದೆಗಳ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ ಎಷ್ಟು; (ಕೊರತೆಯನ್ನು ಯಾವಾಗ ತುಂಬಲಾಗುವುದು)	ಉಡುಪಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಹಂತದ ಕಛೇರಿಗಳ ವಿವರ ಈ ಕೆಳಗಿನಂತೆ ಇರುತ್ತವೆ. 1. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ ಉಡುಪಿ ಜಿಲ್ಲೆ. 2. ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ. 3. ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ ಕುಂದಾಪುರ ತಾಲ್ಲೂಕು. ಉಡುಪಿ ಜಿಲ್ಲೆ. 4. ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ ಕಾರ್ಕಳ ತಾಲ್ಲೂಕು. ಉಡುಪಿ ಜಿಲ್ಲೆ ಸದರಿ ಜಿಲ್ಲೆಗೆ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಹಾಗೂ ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ವಿವರಗಳು ಕೆಳಗಿನಂತಿವೆ.

ಕ್ರ. ಸಂ	ವರ್ಗ	ಮಂಜೂರಾದ ಹುದ್ದೆ	ಭರ್ತಿ ಹುದ್ದೆ	ಖಾಲಿ ಹುದ್ದೆ
1	ಎ	1	1	0
2	ಬಿ	5	1	4
3	ಸಿ	66	21	45
4	ಡಿ	186	111	75
		258	**134**	**124**

- ಉಡುಪಿ ಜಿಲ್ಲೆಯೂ ಸೇರಿದಂತೆ ರಾಜ್ಯದಲ್ಲಿ ಒಟ್ಟಾರೆ ಖಾಲಿ ಇರುವ ಗ್ರೂಪ್ –ಬಿ ಹುದ್ದೆಗಳನ್ನು ತುಂಬಲು ಅನುಮೋದನೆ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಿದೆ.
- ಕೆ.ಪಿ.ಎಸ್.ಸಿ ಯಿಂದ ಸ್ವೀಕೃತಿಗೊಂಡ ಪ್ರ.ದ.ಸ -58, ದ್ವಿ.ದ.ಸ-70 ಹುದ್ದೆಗಳನ್ನು ಕೌನ್ಸಿಲಿಂಗ್ ಮೂಲಕ ಜುಲೈ-2021ರಲ್ಲಿ ಭರ್ತಿ ಮಾಡಲಾಗಿದೆ.
- ಖಾಲಿ ಇರುವ ಗ್ರೂಪ್ –ಸಿ ಹುದ್ದೆಗಳ ಪೈಕಿ ನಿಲಯ ಮೇಲ್ವಿಚಾರಕರ (ಮಹಿಳೆ) ಹುದ್ದೆಗಳನ್ನು ತುಂಬಲು ಈಗಾಗಲೇ ಕೆ.ಪಿ.ಎಸ್.ಸಿ ಯಿಂದ ಅಂತಿಮ ಆಯ್ಕೆ ಪಟ್ಟಿ ದಿನಾಂಕ:16-11-2021ರಂದು ಸ್ವೀಕೃತಿಗೊಂಡಿದ್ದು, ಅದರಂತೆ ಅಭ್ಯರ್ಥಿಗಳ ಸಿಂದುತ್ವ ಪ್ರಮಾಣ ಪತ್ರ ಪೋಲೀಸ್ ವರದಿಯನ್ನು ಪಡೆಯಲು ಕ್ರಮವಹಿಸಲಾಗಿರುತ್ತದೆ.

...2

		ಸದರಿ ದಾಖಲಾತಿಗಳು ಹಾಗೂ ಪ್ರಮಾಣ ಪತ್ರಗಳ ನೈಜತೆ ವರದಿಗಳು ಸ್ವೀಕೃತಿಗೊಂಡ ಕೂಡಲೆ ನಿಯಮಾನುಸಾರ ನೇಮಕಾತಿ ಆದೇಶ ನೀಡಲಾಗುವುದು. • ಖಾಲಿ ಇರುವ ಗ್ರೂಪ್ -ಸಿ ಹುದ್ದೆಗಳ ಪೈಕಿ ನಿಲಯ ಮೇಲ್ವಿಚಾರಕರ (ಪುರುಷ) ಹುದ್ದೆಗಳನ್ನು ತುಂಬಲು ಕೆ.ಪಿ.ಎಸ್.ಸಿ ಯಿಂದ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಿಸಿದ್ದು, ಅಂತಿಮ ಆಯ್ಕೆ ಪಟ್ಟಿ ನಿರೀಕ್ಷಿಸಲಾಗಿದೆ. ಖಾಲಿ ಇರುವ ಗ್ರೂಪ್-ಡಿ ಹುದ್ದೆಗಳನ್ನು ಹೊರಸಂಪನ್ಮೂಲ ಏಜೆನ್ಸಿ ಮೂಲಕ ಪಡೆಯಲಾಗುತ್ತಿದೆ.
ಆ)	ಉಡುಪಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ಹಾಸ್ಟೆಲ್ ಗಳ ಸಂಖ್ಯೆ ಎಷ್ಟು; ಅವುಗಳ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರ ಹಾಸ್ಟೆಲ್ ಗಳ ಸಂಖ್ಯೆ ಎಷ್ಟು; ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ಹಾಸ್ಟೆಲ್ ಗಳ ಸಂಖ್ಯೆ ಎಷ್ಟು; ಅವುಗಳ ವಿದ್ಯಾರ್ಥಿಗಳ ಸಾಮರ್ಥ್ಯ ವೆಷ್ಟು; ಖಾಲಿಯಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;	ಉಡುಪಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಒಟ್ಟು 41 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ. ಈ ಪೈಕಿ 21 ಬಾಲಕರ ಮತ್ತು 20 ಬಾಲಕಿಯರ ವಿದ್ಯಾರ್ಥಿನಿಲಯಗಳಾಗಿರುತ್ತವೆ. ಉಡುಪಿ ಜಿಲ್ಲೆಯಲ್ಲಿನ ಒಟ್ಟು 41 ವಿದ್ಯಾರ್ಥಿನಿಲಯಗಳ ಪೈಕಿ 18 ಮೆಟ್ರಿಕ್-ಪೂರ್ವ ಮತ್ತು 23 ಮೆಟ್ರಿಕ್-ನಂತರದ ವಿದ್ಯಾರ್ಥಿನಿಲಯಗಳಾಗಿರುತ್ತವೆ. ಈ ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳ ಸಾಮರ್ಥ್ಯ ಮತ್ತು ಖಾಲಿಯಿರುವ ವಿದ್ಯಾರ್ಥಿಗಳ ಸಂಖ್ಯೆಯ ವಿವರಗಳನ್ನು **ಅನುಬಂಧ-1 ರಲ್ಲಿ** ನೀಡಲಾಗಿದೆ.
ಇ)	ಅವುಗಳಲ್ಲಿ ಸ್ವಂತ ಕಟ್ಟಡಗಳಲ್ಲಿ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಸ್ಟೆಲ್ ಗಳ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸದೇ ಇರುವ ಕಟ್ಟಡಗಳ ಸಂಖ್ಯೆ ಎಷ್ಟು; ಈ ಕಟ್ಟಡಗಳ ಸದ್ಬಳಕೆಗೆ ಇಲಾಖೆಯ ಕ್ರಮವೇನು; (ತಾಲ್ಲೂಕುವಾರು ಹಾಸ್ಟೆಲ್ ವಾರು ಮಾಹಿತಿಯನ್ನು ನೀಡುವುದು)	ಉಡುಪಿ ಜಿಲ್ಲೆಯಲ್ಲಿನ ಒಟ್ಟು 41 ವಿದ್ಯಾರ್ಥಿನಿಲಯಗಳ ಪೈಕಿ 29 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ 3 ವಿದ್ಯಾರ್ಥಿನಿಲಯಗಳು ಉಚಿತ ಕಟ್ಟಡಗಳಲ್ಲಿ ಹಾಗೂ 9 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ತಾಲ್ಲೂಕುವಾರು, ವಿದ್ಯಾರ್ಥಿನಿಲಯವಾರು ವಿವರಗಳನ್ನು **ಅನುಬಂಧ-2ರಲ್ಲಿ** ನೀಡಲಾಗಿದೆ. ಈ ಪೈಕಿ ಕಾರ್ಯನಿರ್ವಹಿಸದೇ ಇರುವ ವಿದ್ಯಾರ್ಥಿನಿಲಯಗಳ ಕಟ್ಟಡಗಳು ಯಾವುದೂ ಇರುವುದಿಲ್ಲ.
ಈ)	ಉಡುಪಿ ಜಿಲ್ಲೆಯಲ್ಲಿ ಯಡಾಡಿ ಮತ್ಯಾಡಿಯಲ್ಲಿರುವ ಮೊರಾರ್ಜಿ ದೇಸಾಯಿ ವಸತಿಶಾಲೆಯನ್ನು ಯಾವಾಗ ಪ್ರಾರಂಭಿಸಲಾಯಿತು; ಇದರ ವಿದ್ಯಾರ್ಥಿಗಳ ಸಾಮರ್ಥ್ಯ ವೆಷ್ಟು; ಖಾಲಿಯಿರುವ ಸೀಟುಗಳ ಸಂಖ್ಯೆ ಎಷ್ಟು; ಶಾಲೆಗೆ ಮಂಜೂರಾತಿಯಾದ ಹುದ್ದೆಗಳ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳ ಸಂಖ್ಯೆ ಎಷ್ಟು; ಕೊರತೆಯನ್ನು ಯಾವಾಗ ತುಂಬಲಾಗುವುದು; (ಹುದ್ದೆವಾರು, ಸಿಬ್ಬಂದಿವಾರು ಮಾಹಿತಿ ಒದಗಿಸುವುದು)	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿ ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕು ಯಡಾಡಿ ಮತ್ಯಾಡಿ (ಕೋಟೇಶ್ವರ), ಗ್ರಾಮದಲ್ಲಿ ಹಿಂದುಳಿದ ವರ್ಗದ ಮೊರಾರ್ಜಿ ದೇಸಾಯಿ ವಸತಿ ಶಾಲೆ, 2008ರಲ್ಲಿ ಪ್ರಾರಂಭವಾಗಿ ಕಾರ್ಯನಿರ್ವಹಿಸುತ್ತಿರುತ್ತದೆ. ಸದರಿ ವಸತಿ ಶಾಲೆಯಲ್ಲಿ ಪ್ರತಿ ತರಗತಿಗೆ 50 ವಿದ್ಯಾರ್ಥಿಗಳಂತೆ 250 ವಿದ್ಯಾರ್ಥಿಗಳ ಸಂಖ್ಯಾಬಲ ಹೊಂದಿದ್ದು, ಪ್ರಸ್ತುತ 216 ವಿದ್ಯಾರ್ಥಿಗಳ ದಾಖಲಾಗಿರುತ್ತಾರೆ. 34 ಸೀಟುಗಳು ಖಾಲಿಯಿರುತ್ತವೆ. (6ನೇ ತರಗತಿ-22, 7ನೇ ತರಗತಿ-2, 8ನೇ ತರಗತಿ-1, 9ನೇ ತರಗತಿ-3 ಹಾಗೂ

...3

		10ನೇ ತರಗತಿ-6) ಕೋವಿಡ್ 19 ಲಾಕ್ ಡೌನ್ ಹಿನ್ನೆಲೆಯಲ್ಲಿ 6ನೇ ತರಗತಿಯ ದಾಖಲಾತಿ ಪ್ರಕ್ರಿಯೆ ವಿಳಂಬವಾಗಿದ್ದು, 2021-22ನೇ ಸಾಲಿನ ದಾಖಲಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಈ ಶಾಲೆಗೆ 25 ಬೋಧಕ /ಬೋಧಕೇತರ ಹುದ್ದೆಗಳು ಮಂಜೂರಾಗಿದ್ದು, ಹುದ್ದೆವಾರು, ಸಿಬ್ಬಂದಿವಾರು ಮಾಹಿತಿಯನ್ನು ಅನುಬಂಧ-3 ರಲ್ಲಿ ಲಗತ್ತಿಸಿದೆ.
ಉ)	ಶಾಲೆಯಲ್ಲಿ ಮಕ್ಕಳ ರಕ್ಷಣೆಗೆ, ಸುರಕ್ಷತೆಗೆ ಹಾಗೂ ಯಾವುದೇ ರೀತಿಯ ಕಿರುಕುಳಗಳು ಆಗದಂತೆ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ?	ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿನ ವಸತಿಶಾಲೆ/ಕಾಲೇಜುಗಳಲ್ಲಿವಿದ್ಯಾಭ್ಯಾಸಮಾಡುತ್ತಿರುವವಿದ್ಯಾರ್ಥಿಗಳರಕ್ಷಣೆಗೆ, ಸುರಕ್ಷತೆಗಾಗಿ ಎಲ್ಲಾ ವಸತಿ ಶಾಲೆಗಳಲ್ಲಿ ಕಾವಲುಗಾರರನ್ನು ನೇಮಿಸಿಕೊಳ್ಳಲಾಗಿರುತ್ತದೆ. ಸುರಕ್ಷತೆಗಾಗಿ ವಸತಿಶಾಲೆ /ಕಾಲೇಜುಗಳ ಒಳಗಡೆ ಅನುದಾನದ ಲಭ್ಯತೆ ಅನುಸಾರವಾಗಿ ಸಿಸಿ ಕ್ಯಾಮರಗಳನ್ನು ಅಳವಡಿಸಲಾಗಿದೆ. ವಿದ್ಯಾರ್ಥಿನಿಯರಿಗೆ ಸ್ವಯಂ ರಕ್ಷಣೆ ಮಾಡಿಕೊಳ್ಳಲು ಪೋಲಿಸ್ ಇಲಾಖೆಯಿಂದ ತರಬೇತಿ ಕಾರ್ಯಾಗಾರಗಳನ್ನು ನಡೆಸಲಾಗಿರುತ್ತದೆ. ಅಲ್ಲದೇ ಪ್ರಾರಂಭಿಕವಾಗಿ 300 ವಸತಿಶಾಲೆ /ಕಾಲೇಜುಗಳಲ್ಲಿನ ವಿದ್ಯಾರ್ಥಿನಿಯರಿಗೆ ಸ್ವಯಂ ರಕ್ಷಣೆಗಾಗಿ ಕರಾಟೆ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸರ್ಕಾರದಪತ್ರಸಂಖ್ಯೆ: ಸಕಇ442ಪಕವಿ2018ದಿ:15.09.2018 ರನ್ವಯ ರಾಜ್ಯ ಮಕ್ಕಳ ರಕ್ಷಣಾ ನೀತಿ-2016ರ ನಿಯಮದಂತೆ ವಸತಿಶಾಲೆ/ ಕಾಲೇಜುಗಳಲ್ಲಿ ಶಾಲಾ ನಿರ್ವಹಣಾ ಸಮಿತಿ/ ಪೋಷಕ ಶಿಕ್ಷಕರ ಸಂಘವನ್ನು ರಚಿಸಿ, ಮಕ್ಕಳ ಸುರಕ್ಷತೆಗೆ ಕ್ರಮವಹಿಸುವಂತೆ ಸಂಘದ ಅಧಿಕೃತ ಜ್ಞಾಪನ ಪತ್ರದಿ:13.03.2017, ದಿ: 26.10.2018 ಹಾಗೂ 17.07.2021ರ ಕಛೇರಿ ಪತ್ರಗಳಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಎಲ್ಲಾ ವಸತಿಶಾಲೆ /ಕಾಲೇಜುಗಳ ಪ್ರಾಂಶುಪಾಲರುಗಳಿಗೆ ತಿಳಿಸಲಾಗಿರುತ್ತದೆ.

ಸಂಖ್ಯೆ:ಹಿಂವಕ 744ಬಿಂಎಂಎಸ್ 2021

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು